**ಪ್ರಧಾನ ಸಿವಿಲ್ ನ್ಯಾಯಾಧೀಶರವರ ನ್ಯಾಯಾಲಯ ಮತ್ತು ಜೆ ಎಂ ಎಫ್ ಸಿ, ಹರಿಹರ**

**ಸಿ.ಸಿ. 6856/2024**

**ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಭೋಧಿಸಲಾಯಿತು. ಪಿಡಬ್ಲ್ಯೂ04**

**ದಿನಾಂಕಃ 23.12.2025 ಸಿಡಬ್ಲ್ಯೂ03**

| | |
|---|---|
| ಹೆಸರು | ಮಂಜುನಾಥ |
| ತಂದೆ ಹೆಸರು | ವೀರಭದ್ರಪ್ಪ |
| ವಯಸ್ಸು | 28 ವರ್ಷ |
| ಉದ್ಯೋಗ | ತರಗಾರ ಕೆಲಸ |
| ವಾಸ ಸ್ಥಳ | ದೀಟೂರು |

**ಮುಖ್ಯ ವಿಚಾರಣೆಃ** ಸಹಾಯಕ ಸರ್ಕಾರಿ ಅಭಿಯೋಜಕರಿಂದಃ

ಚಾಸಾ. 1 ಮತ್ತು 2 ರವರ ಪರಿಚಯವಿದೆ. ಸಾಕ್ಷಿಗೆ ಒಂದು ದಾಖಲೆಯನ್ನು ತೋರಿಸಲಾಗಿ ಅದರಲ್ಲಿ ತಮ್ಮ ಸಹಿಯನ್ನು ಗುರುತಿಸಿದ್ದು ಅದು ಪಂಚರಿಗೆ ನೀಡಿದ ನೋಟಿಸ್ ಆಗಿದ್ದು ಅದನ್ನು ನಿಪಿ.5 ಎಂದು ಸಾಕ್ಷಿಯು ಗುರುತಿಸಿದ ಸಹಿಯನ್ನು ನಿಪಿ.5(ಎ) ಎಂದು ಗುರುತಿಸಲಾಯಿತು. ಸಾಕ್ಷಿಗೆ ಇನ್ನೊಂದು ದಾಖಲೆಯನ್ನು ತೋರಿಸಲಾಗಿ ಅದರಲ್ಲಿ ತಮ್ಮ ಸಹಿಯನ್ನು ಗುರುತಿಸಿದ್ದು ಅದು ಕೃತ್ಯ ನಡೆದ ಸ್ಥಳ ಮತ್ತು ಅಮಾನತು ಪಂಚನಾಮೆ ಆಗಿದ್ದು ಅದನ್ನು ಈಗಾಗಲೇ ನಿಪಿ.2 ಎಂದು ಗುರುತಿಸಿದ್ದು ಸಾಕ್ಷಿಯು ಗುರುತಿಸಿದ ಸಹಿಯನ್ನು ನಿಪಿ.2(ಸಿ) ಎಂದು ಗುರುತಿಸಲಾಯಿತು. ಸದರಿ ಸಹಿಯನ್ನು ದಿಃ 27.08.2024 ರಂದು ಮದ್ಯಾಹ್ನ 1.30 ಗಂಟೆ ಸುಮಾರು ದೀಟೂರು ಗ್ರಾಮದ ಮಹೇಶ್ವರ ದೇವಸ್ಥಾನದ ಹತ್ತಿರ ಚಾಸಾ.1 ಮತ್ತು 1 ನೇ ಆರೋಪಿಯ ನಡುವೆ ಆದ ಗಲಾಟೆ ವಿಚಾರವಾಗಿ ಪಂಚನಾಮೆ ಜರುಗಿಸಲು ಬಂದ ಸಂದರ್ಭದಲ್ಲಿ ಮಾಡಿರುತ್ತೇನೆ. ಸದರಿ ಸಂದರ್ಭದಲ್ಲಿ ನಾನು ಚಾಸಾ.1 ಮತ್ತು 2 ರವರು ಇದ್ದೆವು. ಸದರಿ ಕಾಲಕ್ಕೆ ಪೊಲೀಸರು ಛಾಯ ಚಿತ್ರ ತೆಗೆದಿರುತ್ತಾರೆ. ಸಾಕ್ಷಿಯು ಗುರುತಿಸಿದ ಛಾಯ ಚಿತ್ರಗಳನ್ನು ಈಗಾಗಲೇ ನಿಪಿ. 3 ಮತ್ತು 4 ಎಂದು ಗುರುತಿಸಲಾಗಿದೆ. ಸದರಿ ಸಂದರ್ಭದಲ್ಲಿ ಪೊಲೀಸರು 1 ಕಲ್ಲು ಮತ್ತು ಕಟ್ಟಿಗೆಯನ್ನು ತೆಗೆದುಕೊಂಡು ಛಾಯ ಚಿತ್ರ ತೆಗೆಸಿರುತ್ತಾರೆ. ಸದರಿ ಕಲ್ಲು ಮತ್ತು ಕಟ್ಟಿಗೆಯನ್ನು ಈಗ ನ್ಯಾಯಾಲಯದಲ್ಲಿ ನೋಡುತ್ತಿದ್ದೆನೆ. ಸಾಕ್ಷಿಯು ಗುರುತಿಸಿದ 1 ಕೋಲು ಮತ್ತು ಕಲ್ಲನ್ನು ಈಗಾಗಲೇ ಕ್ರಮವಾಗಿ ಮು.ಮಾ 1 ಮತ್ತು 2 ಎಂದು ಗುರುತಿಸಲಾಗಿದೆ.

**ಪಾಟೀ ಸವಾಲುಃ ಆರೋಪಿತರ ಪರ ಶ್ರೀ ಪಿ ಎಸ್ ಜೆ ವಕೀಲರಿಂದಃ**

ಈ ದಿನ ಸ್ಥಳ ಮತ್ತು ಅಮಾನತು ಪಂಚನಾಮೆ ದಿಃ 27.08.2024 ಎಂದು ಕೈಯಲ್ಲಿ ಬರೆದುಕೊಂಡು ಬಂದಿದ್ದೀರಾ ಎಂದರೆ ಸಾಕ್ಷಿಯು ಹೌದು ಎಂದು ನನಗೆ ನೆನಪು ಉಳಿಯದ ಕಾರಣ

ಬರೆದುಕೊಂಡು ಬಂದಿದ್ದೇನೆ ಎಂದು ನುಡಿಯುತ್ತಾರೆ. ಚಾಸಾ.1 ಈ ದಿನ ನ್ಯಾಯಾಲಯದ ಹೊರಗೆ ನಿಂತಿದ್ದಾರೆ ಎಂದರೆ ಸರಿ. ಈ ದಿನ ನನ್ನನ್ನು ಅವರೇ ನ್ಯಾಯಾಲಯಕ್ಕೆ ಕರೆದುಕೊಂಡು ಬಂದಿದ್ದಾರೆ ಎಂದರೆ ಸರಿ. ಗಲಾಟೆಯಾದ ನಿಖರವಾದ ದಿನಾಂಕ ನನಗೆ ಗೊತ್ತಿಲ್ಲ. ಪೊಲೀಸರು ಸ್ಥಳಕ್ಕೆ ಬರುವ ಪೂರ್ವದಲ್ಲಿ ನಾನು ನನ್ನ ಮನೆಯ ಹತ್ತಿರ ಇದ್ದೆನು. ಪೊಲೀಸರು ನನಗೆ ಪಂಚನಾಮೆಗೆ ಸಹಕರಿಸಲು ಯಾವುದೇ ನೋಟಿಸ್ ನೀಡಿಲ್ಲ. ಮು.ಮಾ 1 ಮತ್ತು 2 ರಂತಹ ಕೋಲು ಮತ್ತು ಕಟ್ಟಿಗೆ ಜಮೀನುಗಳಲ್ಲಿ ಸಿಗುತ್ತವೆ ಎಂದರೆ ಸರಿ. ನಿಪಿ.2 ರಲ್ಲಿ ಬರೆದಿರುವ ಸಂಗತಿಗಳ ಬಗ್ಗೆ ನನಗೆ ಮಾಹಿತಿ ಇಲ್ಲ ಎಂದರೆ ಸರಿ. ನಿಪಿ.3 ಮತ್ತು 4 ನ್ನು ಯಾವ ಕಾರಣಕ್ಕೆ ತೆಗೆದಿರುತ್ತಾರೆ ಎಂದು ನನಗೆ ಗೊತ್ತಿಲ್ಲ ಎಂದರೆ ಸರಿ. ಸ್ಥಳದಲ್ಲಿ ಯಾವುದೇ ಪಂಚನಾಮೆ ಜರುಗಿಸಿಲ್ಲ, ಸ್ಥಳದಲ್ಲಿ ಯಾವುದೇ ಛಾಯ ಚಿತ್ರ ತೆಗೆದಿಲ್ಲ ಎಂದರೆ ಸರಿಯಲ್ಲ. ಚಾಸಾ.1 ರವರಿಗೆ ಅನುಕೂಲವಾಗಲಿ ಎಂದು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಮರುವಿಚಾರಣೆಃ ಇಲ್ಲ.**

(ಮುಕ್ತ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ಬೆರಳಚ್ಚುಪಡಿಸಲಾಯಿತು.)

ಓದಿ ಹೇಳಿ ಕೇಳಿ ಸರಿ ಇದೆ.

Sd/-
ಪ್ರಧಾನ ಸಿವಿಲ್ ನ್ಯಾಯಾಧೀಶರು
ಮತ್ತು ಜೆಎಂಎಫ್‌ಸಿ, ಹರಿಹರ